ತೋಟಗಾರಿಕಾ ಸಂಶೋಧನಾ ಕೇಂದ್ರ ಸ್ಥಾಪನೆ

1894 (1406); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ (ರೋಣ)

ಅ) ಗದಗ ಜಿಲ್ಲೆ ರೋಣ ತಾಲ್ಲೂಕಿನಲ್ಲಿ ಬಹಳಷ್ಟು ರೈತರು ಸಾಕಷ್ಟು ಪ್ರಮಾಣದಲ್ಲಿ ತೋಟಗಾರಿಕಾ ಬೆಳೆಗಳ ಮೇಲೆ ಅವಲಂಬಿತರಿದ್ದು, ಈ ಭಾಗದ ತೋಟಗಾರಿಕಾ ಬೆಳೆಗಳ ರೈತರಿಗೆ ಇನ್ನೂ ಹೆಚ್ಚು ಪ್ರೋತ್ಸಾಹ ನೀಡುವಲ್ಲಿ ಸರಕಾರದ ಚಿಂತನೆಯೇನು;

ಆ) ರೋಣ ತಾಲ್ಲೂಕಿನಲ್ಲಿ ತೋಟಗಾರಿಕೆ ಸಂಶೋಧನಾ ಕೇಂದ್ರವನ್ನು ಸ್ಥಾಪನೆ ಮಾಡಲು ಈಗಾಗಲೇ 10.20 ಎಕರೆ ಫಲವತ್ತಾದ ಜಮೀನು ಇಲಾಖೆಯ ಹೆಸರಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಾದರೆ, ತೋಟಗಾರಿಕಾ ಬೆಳೆಗಳ ಸಂಶೋಧನಾ ಕೇಂದ್ರವನ್ನು ಪ್ರಾರಂಭಿಸಲಾಗುವುದೇ?

ಡಾ. ಶಾಮನೂರು ಶಿವಶಂಕರಪ್ಪ (ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು)

ಅ) ಅನುದಾನದ ಲಭ್ಯತೆಯನ್ನು ಆಧರಿಸಿ ರೈತರಿಗೆ ಇನ್ನೂ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ತೋಟಗಾರಿಕೆ ಯೋಜನೆಗಳು

1897 (2875); ಶ್ರೀ ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ರಾಜ್ಯದಲ್ಲಿ ರಾಜ್ಯ ಸರ್ಕಾರದ ಮತ್ತು ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಯಡಿಯಲ್ಲಿ ವಿವಿಧ ಜಿಲ್ಲೆಗಳಲ್ಲಿ ಜಾರಿಯಲ್ಲಿರುವ ಯೋಜನೆಗಳು ಯಾವುವು;